# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 256 (365)

ಸದಸ್ಯರ ಹೆಸರು : ಶ್ರೀ ಟಿ.ಎ.ಶರವಣ

ಉತ್ತರಿಸುವ ದಿನಾಂಕ : 14-09-2022

ಉತ್ತರಿಸುವ ಸಚಿವರು : ಮಾನ್ಯ ಲೋಕೋಪಯೋಗಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಲೋಕೋಪಯೋಗಿ ಇಲಾಖೆಯ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 14.12.2021 ರಂದು ಸಹಾಯಕ ಅಭಿಯಂತರರು ಮತ್ತು ಕಿರಿಯ ಅಭಿಯಂತರರುಗಳಿಗೆ ಪರೀಕ್ಷೆ ನಡೆಸಿದ್ದು ಅದರ ಫಲಿತಾಂಶ ಪ್ರಕಟವಾಗಿಲ್ಲದಿರುವುದಕ್ಕೆ ಕಾರಣಗಳೇನು? (ಏಕೆ) | ಲೋಕೋಪಯೋಗಿ ಇಲಾಖೆಯ ಸಹಾಯಕ ಇಂಜನಿಯರ್ ಮತ್ತು ಕಿರಿಯ ಇಂಜನಿಯರ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆ ಪ್ರಕ್ರಿಯೆಯನ್ನು ಸದರಿ ವೃಂದದ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗಕ್ಕೆ ವಹಿಸಲಾಗಿದೆ. ಈ ಸಂಬಂಧ ಆಯೋಗವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿದ್ದು ಪರೀಕ್ಷೋತ್ತರ ಕಾರ್ಯ ಪ್ರಗತಿಯಲ್ಲಿದ್ದು ಫಲಿತಾಂಶವನ್ನು ಶೀಘ್ರದಲ್ಲಿಯೇ ಪ್ರಕಟಿಸಲಾಗುವುದೆಂದು ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುತ್ತದೆ. |
| ಆ | ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳ ಪಟ್ಟಿಯನ್ನು ಸರ್ಕಾರ ಯಾವಾಗ ಬಿಡುಗಡೆ ಮಾಡಲಿದೆ | |
| ಇ | ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಸಂಬಂಧಪಟ್ಟ ಅಭ್ಯರ್ಥಿಗಳಿಗೆ ನೀಡಲು ಎಷ್ಟು ಕಾಲಾವಕಾಶ ಬೇಕಾಗಿದೆ. | |
| ಈ | ಸರ್ಕಾರ ಒಟ್ಟು ಎಷ್ಟು ಹುದ್ದೆಗಳಿಗೆ ಇಲ್ಲಿಯವರೆಗೆ ಆಯ್ಕೆ ಮಾಡಲು ಉದ್ದೇಶಿಸಿದೆ; ಇಂತಹ ವಿಳಂಬವನ್ನು ಸರ್ಕಾರ ಶೀಘ್ರದಲ್ಲಿ ಪರಿಹರಿಸಲಿದೆಯೇ? | ಸರ್ಕಾರವು ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ ವೃಂದದ 660 ಹುದ್ದೆಗಳು ಮತ್ತು ಕಿರಿಯ ಇಂಜಿನಿಯರ್ ವೃಂದದ 330 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಉದ್ದೇಶಿಸಿದೆ. ಈ ಸಂಬಂಧ ಆಯ್ಕೆ ಪ್ರಕ್ರಿಯೆಯನ್ನು ಶೀಘ್ರವಾಗಿ ಕೈಗೊಂಡು ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಈಗಾಗಲೇ ಪತ್ರ ಬರೆಯಲಾಗಿದ್ದು ಸದರಿ ಆಯೋಗವು ನೇಮಕಾತಿಯ ಪರೀಕ್ಷೋತ್ತರ ಕಾರ್ಯಗಳು ಪ್ರಗತಿಯಲ್ಲಿದ್ದು ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿ ಕೊಡಲಾಗುವುದೆಂದು ತಿಳಿಸಿರುತ್ತದೆ. |

ಸಂಖ್ಯೆ:ಲೋಇ 84 ಪಿಡಿಎಸ್ 2022

(ಸಿ.ಸಿ.ಪಾಟೀಲ್)
ಲೋಕೋಪಯೋಗಿ ಸಚಿವರು